773 ಶ್ರೀ ಬಂಡೆಪ್ಪ ಕಾಶ್ಯಂಪೂರ್ : ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೀದರ್ ದಕ್ಷಿಣ ಕ್ಷೇತ್ರದಲ್ಲಿ ನಡೆದ ಜನಸ್ಪಂದನ ಕಾರ್ಯಕ್ರಮ ದಡಿಯಲ್ಲಿ ಬಂದಿರುವ ಅರ್ಜಿಗಳ ಸಂಖ್ಯೆ ಎಷ್ಟು?

ಆ) ಬಂದ ಅರ್ಜಿಗಳಲ್ಲಿ ಎಷ್ಟು ಅರ್ಜಿಗಳನ್ನು ವಿಲೇವಾರಿ ಮಾಡಲಾಗಿದೆ? ಎಷ್ಟು ಅರ್ಜಿಗಳು ಬಾಕಿ ಉಳಿದಿವೆ, ಉಳಿಯಲು ಕಾರಣಗಳೇನು?

ಇ) ಜನಸ್ಪಂದನ ಕಾರ್ಯಕ್ರಮ ಪ್ರಾರಂಭವಾದ ಮೇಲೆ ಪರಿಣಾಮಕಾರಿಯಾಗಿ ಸಾರ್ವಜನಿಕರ ಕೆಲಸಗಳು ಆಗುತ್ತಿವೆಯೇ?

ಈ) ಇಲ್ಲದಿದ್ದಲ್ಲಿ ಕಾರಣಗಳೇನು?

ಶ್ರೀ ಬಿ.ಎಸ್.ಯಡಿಯೂರಪ್ಪ (ಮುಖ್ಯಮಂತ್ರಿಯವರು) :

ಅ) 10780 ಅರ್ಜಿಗಳು.

ಆ) 10,548 ಅರ್ಜಿಗಳು ವಿಲೇವಾರಿಯಾಗಿರುತ್ತವೆ. 232 ಅರ್ಜಿಗಳು ಬಾಕಿ ಇರುತ್ತವೆ.

ಬಾಕಿ ಇರುವ ಅರ್ಜಿಗಳ ಪೈಕಿ ಆಶ್ರಯಯೋಜನೆಯಡಿ ಮನೆ ಮಂಜೂರಾತಿ, ಸರ್ಕಾರಿ ಜಮೀನು ಅಕ್ರಮ-ಸಕ್ರಮ ಬಗ್ಗೆ, ಹಕ್ಕು ಪತ್ರ ನಿವೇಶನ ಕೋರಿರುವುದು, ಜಮೀನು ಮಂಜೂರಾತಿ ಮತ್ತು ಕೆಲವು ಅರ್ಜಿಗಳು ಸಮರ್ಪಕವಿಲ್ಲದಿರುವುದು, ಇನ್ನು ಮುಂತಾದ ಕಾರಣಗಳಿಂದ ಅರ್ಜಿಗಳು ನಿಯಮಾನುಸಾರ ಪರಿಶೀಲನೆಯಾಗಬೇಕಾಗಿರುವುದರಿಂದ ಬಾಕಿ ಉಳಿದಿರುತ್ತದೆ. ವಿಲೇವಾರಿಗೆ ಬಾಕಿ ಇರುವ ಅರ್ಜಿಗಳನ್ನು ನಿಯಮಾನುಸಾರ ಪರಿಶೀಲಿಸಿ ತ್ವರಿತಗತಿಯಲ್ಲಿ ವಿಲೇಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

ಇ) ಹೌದು.

ಈ) ಉದ್ಭವಿಸುವುದಿಲ್ಲ.

ಉಡುಪಿ ಜಿಲ್ಲೆ ಕಾರ್ಕಳ ತಾಲ್ಲೂಕು ಕೂಡ್ಲು ಪ್ರದೇಶದ ಅಭಿವೃದ್ಧಿ ಬಗ್ಗೆ.

868 ಶ್ರೀ ಗೋಪಾಲ ಭಂಡಾರಿ.ಹೆಚ್ : ಮಾನ್ಯ ಪ್ರವಾಸೋದ್ಯಮ ಮತ್ತು ಮೂಲಭೂತ ಸೌಕರ್ಯಗಳ ಅಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಉಡುಪಿ ಜಿಲ್ಲೆಯ ಕಾರ್ಕಳ ತಾಲ್ಲೂಕು ಕೂಡ್ಲು ಪ್ರದೇಶವನ್ನು ಪ್ರವಾಸೋದ್ಯಮ ಕ್ಷೇತ್ರವಾಗಿ ಅಭಿವೃದ್ಧಿಪಡಿಸಲು ಸರ್ಕಾರ ಚಿಂತನೆ ನಡೆಸಿದೆಯೇ;

ಆ) ಹಾಗಿದ್ದಲ್ಲಿ, ಸರ್ಕಾರ ಹಮ್ಮಿಕೊಂಡಿರುವ ಕಾರ್ಯಕ್ರಮಗಳು ಯಾವುವು?

ಶ್ರೀ ಜಿ.ಜನಾರ್ಧನ ರೆಡ್ಡಿ : (ಪ್ರವಾಸೋದ್ಯಮ ಮತ್ತು ಮೂಲಭೂತ ಸೌಕರ್ಯಗಳ ಅಭಿವೃದ್ಧಿ ಸಚಿವರು) :

ಅ) ಕೂಡ್ಲು ಜಲಪಾತವಿರುವ ಪ್ರದೇಶವು ಅರಣ್ಯ ಇಲಾಖೆಯ ವ್ಯಾಪ್ತಿಯಲ್ಲಿ ಬರುತ್ತದೆ. ಈ ಪ್ರದೇಶವನ್ನು ಪ್ರವಾಸಿ ತಾಣವಾಗಿ ಅಭಿವೃದ್ಧಿಪಡಿಸುವ ಸಂಬಂಧ ಅರಣ್ಯ ಇಲಾಖೆಯ ಅಧಿಕಾರಿಗಳೊಂದಿಗೆ ಚರ್ಚಿಸಿ ಅಭಿವೃದ್ಧಿಪಡಿಸಲು ಸಾಧ್ಯವಿದ್ದಲ್ಲಿ ಪ್ರಸ್ತಾವನೆ ಸಲ್ಲಿಸಲು ಪ್ರವಾಸೋದ್ಯಮ ಇಲಾಖೆಯ ವಿಶೇಷಾಧಿಕಾರಿಗಳಿಗೆ ಸೂಚಿಸಲಾಗಿದೆ.

Koodluteertha is under the control of Forest Department. To develop this place as a tourist centre, the Special Officer of the Department of Tourism has been asked to discuss with the concerned Forest Department officers and submit a report in this regard.

ಆ) ವರದಿ ಬಂದ ನಂತರ ಅಗತ್ಯವಿದ್ದಲ್ಲಿ ಮುಂದಿನ ಕ್ರಮ ಕೈಗೊಳ್ಳಲಾಗುವುದು.

After getting the report if necessary action will be taken in this regard.

1104 ಶ್ರೀ ಹ್ಯಾರಿಸ್ ಎನ್.ಎ. (ಶಾಂತಿನಗರ) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಪ್ರಸಕ್ತ ಸಾಲಿನಲ್ಲಿ ಜಾರಿಗೊಳಿಸಿದ ಸುವರ್ಣ ರಸ್ತೆ ಯೋಜನೆಯ ವಿವರಗಳೇನು?

ಆ) ಈ ಯೋಜನಾ ಸೌಲಭ್ಯವನ್ನು ಬೆಂಗಳೂರು ಮಹಾನಗರ ವ್ಯಾಪ್ತಿಯ ವಿಧಾನಸಭಾ ಕ್ಷೇತ್ರಗಳಿಗೆ ಅನ್ವಯಿಸುವುದಿಲ್ಲವೆ.

ಇ) ಮಹಾನಗರ ಪಾಲಿಕೆ ವ್ಯಾಪ್ತಿಯ ರಸ್ತೆಗಳ ಅಭಿವೃದ್ಧಿಗೆ ಇಲಾಖೆಯ ಸೌಲಭ್ಯಗಳ ಕೊಡುಗೆಗಳೇನು?

ಈ) ಸುವರ್ಣ ರಸ್ತೆ ಯೋಜನೆಯನ್ನು ಯೋಜಿತ ಅವಧಿಯಲ್ಲಿಯೇ ಜಾರಿಗೊಳಿಸಲು ಸರ್ಕಾರದ ಕ್ರಮಗಳೇನು?

ಶ್ರೀ ಸಿ.ಎಂ.ಉದಾಸಿ (ಲೋಕೋಪಯೋಗಿ ಸಚಿವರು) :

ಅ) 2009-10ನೇ ಸಾಲಿನ ಆಯವ್ಯದಲ್ಲಿ ಲೆ.ಶೀ.5054-04-800-1-09-172(ಯೋಜನೆ)- ರೂ.10,000.00 ಲಕ್ಷಗಳನ್ನು ಒದಗಿಸಲಾಗಿದೆ. ಈ